**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.2416/2022.**

ಪಿರ್ಯಾದುದಾರರುಃ- ನಾಗರಾಜ ಅಣ್ಣಪ್ಪ ನಾಯ್ಕ,
ವಯಸ್ಸು ಸುಮಾರು 33 ವರ್ಷ,
ಸಾಕೀನಃ ಹನುಮಾಪುರ, ಗುಂಡಬಾಳ,
ಪೋಸ್ಟಃ ಮುಟ್ಟಾ
ತಾಲೂಕುಃ ಹೊನ್ನಾವರ (ಉ.ಕ)

**-ವಿರುದ್ಧ-**

ಆರೋಪಿಯ ಹೆಸರುಃ- ಮೆಲ್ವಿನ್ ಜಾನವ್ ತಿಸೇರಾ,
ವಯಸ್ಸು ಸುಮಾರು 31 ವರ್ಷ,
ಸಾಕೀನಃ ಗುಂಡಬಾಳ,
ಪೋಸ್ಟಃ ಮುಟ್ಟಾ
ತಾಲೂಕುಃ ಹೊನ್ನಾವರ (ಉ.ಕ).

****

**ದಂಡ ಪ್ರಕ್ರಿಯಾ ಸಂಹಿತೆ ಕಲಂ. 313 ರನ್ವಯ ಆರೋಪಿಯ ಹೇಳಿಕೆ.**

ಪ್ರಶ್ನೆಃ 1. ನೀವು ಪಿರ್ಯಾದುದಾರರ ಪರವಾಗಿ ಪ್ರಾಸಾ-1 ರವರ ಹೇಳಿಕೆಯನ್ನು ಕೇಳಿದ್ದೀರಾ?

ಆರೋಪಿಯ ಉತ್ತರಃ- ಕೇಳಿದ್ದೇನೆ

ಪ್ರಶ್ನೆಃ 2. ಪ್ರಾಸಾ-1 ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿ ಹಾಗೂ ಪಿರ್ಯಾದಿದಾರನು ತುಂಬಾ ಪರಿಚಯಸ್ಥರಾಗಿದ್ದು, ಆರೋಪಿಯು ಪಿರ್ಯಾದಿದಾರನಿಂದ ಮನೆ ರಿಪೇರಿ ಮತ್ತು ವಾಹನ ಖರೀದಿಗಾಗಿ ರೂ.7,00,000/- ಗಳ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ. ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕರ್ನಾಟಕ ಬ್ಯಾಂಕ್ ಲಿ., ಹೊನ್ನಾವರ** ಶಾಖೆಯ ನಿಪಿ-1 ರ ಚೆಕ್ ನಂ.814393 ನ್ನು ದಿನಾಂಕ 27-10-2021 ರಂದು ರೂ.7,00,000/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್

ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿರುತ್ತೀರೆಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 3. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಬ್ಯಾಂಕ್., ಕವಲಕ್ಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Funds insufficient' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 29-10-2021 ರಂದು ನಿಪಿ-2 ರ ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆಃ 4. ಫ್ರಾಸಾ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಪಿರ್ಯಾದಿಯವರು ನಿಮಗೆ ನಿಪಿ-3 ರಂತೆ ವಕೀಲರ ಮೂಲಕ ದಿನಾಂಕ 07-11-2021 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್‌ನ್ನು ಆರೋಪಿಯು ಸ್ವೀಕರಿಸದೇ ಇನ್ಕಾರ್ ಮಾಡಿದ್ದು, ದಿನಾಂಕಃ 26-11-2021 ರಂದು ಪಿರ್ಯಾದಿದಾರನ ವಕೀಲರಿಗೆ ವಾಪಸ್ಸ್ ಬಂದಿರುತ್ತದೆ. ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ ಇದಕ್ಕೆ ನೀವೇನು ಹೇಳುವಿರಿ?

ಆರೋಪಿಯ ಉತ್ತರಃ- ಸುಳ್ಳು

ಪ್ರಶ್ನೆ 6: ನಿಮ್ಮ ಪರವಾಗಿ ಏನಾದರೂ ಸಾಕ್ಷಿ ಇದೆಯೇ?

ಆರೋಪಿಯ ಉತ್ತರಃ- ಇದೆ

ಪ್ರಶ್ನೆ 7 : ಸದ್ರಿ ಪ್ರಕರಣ ಕುರಿತು ನೀವು ಏನಾದರೂ ಹೇಳುವುದು ಇದೆಯೇ?

ಆರೋಪಿಯ ಉತ್ತರಃ- 25 ಲಕ್ಷ ಹಣ ನೀಡುತ್ತೇನೆ ಆದರೆ ರೂ. 5 ಲಕ್ಷ ಮುಂಚಿತವಾಗಿ ನೀಡಬೇಕು ಹಾಗೂ ಭದ್ರತೆಗಾಗಿ ಚೆಕ್ಕು ನೀಡಬೇಕು ಎಂದು ದೂರುದಾರರು ಹೇಳಿದ್ದರು. ಚೆಕ್ಕಿನ ಮೇಲಿನ ಸಹಿ ನನ್ನದಲ್ಲ, ನಾನು ಹಣ ಪಡೆದಿಲ್ಲ, ಭದ್ರತೆಗಾಗಿ ನೀಡಿದ ಚೆಕ್ಕನ್ನು ದುರುಪಯೋಗ ಪಡಿಸಿದ್ದಾರೆ.

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ)

ಸಹಿ ಇದೆ/-

**ದಿನಾಂಕಃ- 09-06-2025.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ